## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶಿವಮೊಗ್ಗದಲ್ಲಿರುವ ಸರ್ಕಾರಿ ಸಹ್ಯಾದ್ರಿ ಕಲಾ ಮತ್ತು ವಿಜ್ಞಾನ ಕಾಲೇಜನ್ನು ಕುವೆಂಪು ವಿಶ್ವವಿದ್ಯಾಲಯಕ್ಕೆ ವಹಿಸಿಕೊಡುವ ಬಗ್ಗೆ.

ಓದಲಾಗಿದೆ:- ದಿನಾಂಕ 12-12-1989ರ ಕುವೆಂಪು ವಿಶ್ವವಿದ್ಯಾಲಯದ ಕುಲಸಚಿವರ ಪತ್ರ ಸಂಖ್ಯೆ: ಕೆಯುಯು:ಪಿಸಿವಿ:1516:89-90.

: — :

**ಪ್ರಸ್ತಾವನೆ:-**

ಶಿವಮೊಗ್ಗ ನಗರದಲ್ಲಿರುವ ಸರ್ಕಾರಿ ಸಹ್ಯಾದ್ರಿ ಕಲಾ ಮತ್ತು ವಿಜ್ಞಾನ ಕಾಲೇಜನ್ನು ಕುವೆಂಪು ವಿಶ್ವವಿದ್ಯಾಲಯಕ್ಕೆ ವಹಿಸಿಕೊಟ್ಟರೆ ಸದರಿ ಶಿಕ್ಷಣ ಸಂಸ್ಥೆಯನ್ನು ವಿಶ್ವವಿದ್ಯಾಲಯದ ಘಟಕ ಕಾಲೇಜನ್ನಾಗಿ ನಡೆಸುವುದರ ಜೊತೆಗೆ ಪ್ರಸ್ತುತ ಇಲ್ಲಿರುವ ಪದವಿ ಶಿಕ್ಷಣವನ್ನು ಮುಂದುವರಿಸಿಕೊಂಡು ಹೋಗುತ್ತ ಹೆಚ್ಚಿನ ವಿಷಯಗಳಲ್ಲಿ ಸ್ನಾತಕೋತ್ತರ ಶಿಕ್ಷಣವನ್ನು ತೆರೆಯಲು ಅನುಕೂಲವಾಗುತ್ತದೆ. ಸದರಿ ಕಾಲೇಜನ್ನು ಕುವೆಂಪು ವಿಶ್ವವಿದ್ಯಾಲಯಕ್ಕೆ ವಹಿಸಿಕೊಡುವುದರಿಂದ ಅದು ವಿಶ್ವವಿದ್ಯಾಲಯದ ಆಸ್ತಿಯ ಮೊತ್ತವನ್ನು ಹೆಚ್ಚಿಸುವುದರ ಜೊತೆಗೆ ವಿಶ್ವವಿದ್ಯಾಲಯವು ಧನ ಸಹಾಯ ಆಯೋಗದಿಂದ ಅಭಿವೃದ್ಧಿ ಧನ ಸಹಾಯ ಪಡೆಯಲು ಅನುಕೂಲ ಮಾಡಿಕೊಟ್ಟಂತಾಗುತ್ತದೆ. ಇದಲ್ಲದೆ ಪೂರ್ವಭಾವಿ ವ್ಯವಸ್ಥೆಯಲ್ಲಿ ಹೆಚ್ಚಿನ ಹಣ ತೊಡಗಿಸದೆ ವಿವಿಧ ವಿಷಯಗಳಲ್ಲಿ ಸ್ನಾತಕೋತ್ತರ ವಿಭಾಗಗಳನ್ನು ಪ್ರಾರಂಭಿಸಲು ಅನುಕೂಲವಾಗುತ್ತದೆ. ಆದುದರಿಂದ ಸಹ್ಯಾದ್ರಿ ಕಲಾ ಮತ್ತು ವಿಜ್ಞಾನ ಕಾಲೇಜನ್ನು ಕುವೆಂಪು ವಿಶ್ವವಿದ್ಯಾಲಯಕ್ಕೆ ವಹಿಸಿಕೊಡಬೇಕೆಂದು ಸದರಿ ವಿಶ್ವವಿದ್ಯಾಲಯದ ಕುಲಸಚಿವರು ಸರ್ಕಾರವನ್ನು ಕೋರಿದ್ದಾರೆ.

ಆದರೆ ಪ್ರಸ್ತುತ ಪದವಿ ಶಿಕ್ಷಣ ನೀಡುತ್ತಿರುವ ಈ ವಿದ್ಯಾ ಸಂಸ್ಥೆಯನ್ನು ಪ್ರಸ್ತುತವಿರುವಂತೆ ಇಲ್ಲಿ ಪದವಿ ಪೂರ್ವ ಶಿಕ್ಷಣವನ್ನು ಮುಂದುವರಿಸಿಕೊಂಡು ಹೋಗಲು ಸಾಧ್ಯವಿಲ್ಲವೆಂದು ವಿಶ್ವವಿದ್ಯಾಲಯವು ತಿಳಿಸಿದೆ. ಕಾರಣ ಪದವಿ ಪೂರ್ವ ಶಿಕ್ಷಣ ವಿಶ್ವವಿದ್ಯಾಲಯದ ವ್ಯಾಪ್ತಿಗೆ ಬರುವುದಿಲ್ಲ. ಆದುದರಿಂದ ಅದಕ್ಕೆ ಬದಲಿ ವ್ಯವಸ್ಥೆ ಮಾಡಬೇಕೆಂದು ಕೋರಿದೆ.

ಕುವೆಂಪು ವಿಶ್ವವಿದ್ಯಾಲಯದ ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಲಾಗಿದೆ. ಶಿವಮೊಗ್ಗದಲ್ಲಿರುವ ಸಹ್ಯಾದ್ರಿ ಕಲಾ ಮತ್ತು ವಿಜ್ಞಾನ ಕಾಲೇಜನ್ನು ವಿಶ್ವವಿದ್ಯಾಲಯಕ್ಕೆ ವಹಿಸಿಕೊಡುವುದರಿಂದ ವಿಶ್ವವಿದ್ಯಾಲಯ ಹಾಗೂ ಸದರಿ ಶಿಕ್ಷಣ ಸಂಸ್ಥೆ ಇವೆರಡಕ್ಕೂ ಅನುಕೂಲವಾಗುವುದರಿಂದ ಸರ್ಕಾರವು ಈ ಕೆಳಕಂಡ ಆದೇಶವನ್ನು ಹೊರಡಿಸಲು ಇಚ್ಛಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಇಡಿ 1 ಯುಯುವಿ 90, ಬೆಂಗಳೂರು, ದಿನಾಂಕ: 2-6-1992**

ಶಿವಮೊಗ್ಗದಲ್ಲಿರುವ ಸಹ್ಯಾದ್ರಿ ಕಲಾ ಮತ್ತು ವಿಜ್ಞಾನ ಕಾಲೇಜನ್ನು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಕುವೆಂಪು ವಿಶ್ವವಿದ್ಯಾಲಯಕ್ಕೆ ವಹಿಸಲಾಗಿದೆ:-

1) ಶಿವಮೊಗ್ಗ ಸಹ್ಯಾದ್ರಿ ಕಲಾ ಮತ್ತು ವಿಜ್ಞಾನ ಕಾಲೇಜನ್ನು ಕುವೆಂಪು ವಿಶ್ವವಿದ್ಯಾಲಯಕ್ಕೆ ವರ್ಗಾಯಿಸಿದ ನಂತರ ಅದನ್ನು ವಿಶ್ವವಿದ್ಯಾಲಯವು ಒಂದು ಘಟಕ ಕಾಲೇಜನ್ನಾಗಿ ನಿರ್ವಹಿಸತಕ್ಕದ್ದು.



1993

Scanned with OKEN Scanner

2) ಪ್ರಸ್ತುತ ಸದರಿ ಕಾಲೇಜಿನಲ್ಲಿ ಕೆಲಸ ಮಾಡುತ್ತಿರುವ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಮುಂದುವರೆಯಲು ಅಥವಾ ವಿಶ್ವವಿದ್ಯಾಲಯದ ಸೇವೆಗೆ ಸೇರಲು ಅವರುಗಳಿಗೆ ಸೂಕ್ತ ಅವಕಾಶಗಳನ್ನು ಕಲ್ಪಿಸತಕ್ಕದ್ದು.

3) 1992—93ನೇ ಸಾಲಿನ ಅಂತ್ಯದಲ್ಲಿ ಶಿವಮೊಗ್ಗ ಸಹ್ಯಾದ್ರಿ ಕಲಾ ಮತ್ತು ವಿಜ್ಞಾನ ಕಾಲೇಜಿಗೆ ಮಾಡಿರುವ ವೆಚ್ಚದ ಅಂದಾಜುಗಳನ್ನು ಕುವೆಂಪು ವಿಶ್ವವಿದ್ಯಾಲಯದ ಯೋಜನೇತರ ಸಹಾಯಾನುದಾನಕ್ಕೆ ಸೇರಿಸತಕ್ಕದ್ದು.

4) ಪ್ರಸ್ತುತ ಶಿವಮೊಗ್ಗ ಸಹ್ಯಾದ್ರಿ ಕಲಾ ಮತ್ತು ವಿಜ್ಞಾನ ಕಾಲೇಜಿನಲ್ಲಿರುವ ಪದವಿ ಪೂರ್ವ ಶಿಕ್ಷಣವನ್ನು ಕಾಲಕ್ರಮೇಣ ಸ್ಥಗಿತಗೊಳಿಸಿ ಅದರ ಬದಲಿಗೆ ಶಿವಮೊಗ್ಗದಲ್ಲಿರುವ ಇತರೆ ಕಾಲೇಜುಗಳಲ್ಲಿ ಬದಲಿ ವ್ಯವಸ್ಥೆ ಮಾಡತಕ್ಕದ್ದು.

5) ಸಹ್ಯಾದ್ರಿ ಕಲಾ ಮತ್ತು ವಿಜ್ಞಾನ ಕಾಲೇಜಿನ ಆಸ್ತಿ ಮತ್ತು ಬಾಧ್ಯತೆಗಳನ್ನು ಕುವೆಂಪು ವಿಶ್ವವಿದ್ಯಾಲಯಕ್ಕೆ ವರ್ಗಾಯಿಸುವ ಎಲ್ಲಾ ಪ್ರಕ್ರಿಯೆಗಳನ್ನು ಕಾಲೇಜು ಶಿಕ್ಷಣ ನಿರ್ದೇಶಕರು ಹಾಗೂ ಸದರಿ ವಿಶ್ವವಿದ್ಯಾಲಯದ ಕುಲಸಚಿವರು ಪರಸ್ಪರ ಸಮಾಲೋಚಿಸಿ ಕ್ರಮ ತೆಗೆದುಕೊಳ್ಳತಕ್ಕದ್ದು. ಈ ದಿಶೆಯಲ್ಲಿ ಏನಾದರೂ ಮಾರ್ಗದರ್ಶನ ಅಥವಾ ಸ್ಪಷ್ಟೀಕರಣ ಅವಶ್ಯವಿದ್ದಲ್ಲಿ ಸರ್ಕಾರವನ್ನು ಸಂಪರ್ಕಿಸತಕ್ಕದ್ದು, ಹಾಗೂ ಒಂದು ಅಂತಿಮ ವರದಿಯನ್ನು ಸಲ್ಲಿಸತಕ್ಕದ್ದು.

6) ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯಿಂದ ವಿಶ್ವವಿದ್ಯಾಲಯದ ವ್ಯಾಪ್ತಿಗೆ ಬರುವ ಬೋಧಕ ಮತ್ತು ಬೋಧಕೇತರ ನೌಕರರ ಜೇಷ್ಠತೆಯನ್ನು ಕರ್ನಾಟಕ ಸರ್ಕಾರಿ ನೌಕರರ (ಜೇಷ್ಠತೆ) ನಿಯಮಗಳು 1957ರ ನಿಯಮಗಳಲ್ಲಿನ ನಿಯಮ 6ರ ಪ್ರಕಾರ ಪರಿಗಣಿಸತಕ್ಕದ್ದು.

ಈ ಆದೇಶವನ್ನು ದಿನಾಂಕ 21—5—1992 ರಂದು ನಡೆದ ಸಚಿವ ಸಂಪುಟ ಸಭೆಯ ತೀರ್ಮಾನ ಸಂಖ್ಯೆ: ಸಿ 319:92ರ ಅನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,
[signature]
(ಬಿ. ನಾರಾಯಣಸ್ವಾಮಿ) 2/6/92
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ.

ಇವರಿಗೆ,
1) ಕುಲಪತಿಗಳು, ಕುವೆಂಪು ವಿಶ್ವವಿದ್ಯಾಲಯ, ಬಿ.ಆರ್. ಪ್ರಾಜೆಕ್ಟ್, ಶಿವಮೊಗ್ಗ.
2) ಕುಲಸಚಿವರು, ಕುವೆಂಪು ವಿಶ್ವವಿದ್ಯಾಲಯ, ಬಿ.ಆರ್. ಪ್ರಾಜೆಕ್ಟ್, ಶಿವಮೊಗ್ಗ.
3) ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
4) ರಾಜ್ಯಪಾಲರ ಕಾರ್ಯದರ್ಶಿ, ರಾಜಭವನ, ಬೆಂಗಳೂರು.
5) ಸಚಿವ ಸಂಪುಟ ವ್ಯವಹಾರಗಳ ಇಲಾಖೆ (ಸಿ—319—92) ವಿಧಾನ ಸೌಧ, ಬೆಂಗಳೂರು.
6) ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
7) ನಿಯಂತ್ರಕರು, ರಾಜ್ಯ ಲೆಕ್ಕಪತ್ರ ಇಲಾಖೆ, ಬೆಂಗಳೂರು.
8) ಶಿಕ್ಷಣ [illegible] ಮತ್ತು ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ.
9) ಅಧ್ಯಕ್ಷರು, [illegible]: ವಿಶ್ವವಿದ್ಯಾಲಯ ಬೋಧಕರು, ಕುವೆಂಪು ವಿಶ್ವವಿದ್ಯಾಲಯ, ಶಿವಮೊಗ್ಗ.
10) ಆರ್ಥಿಕ ಇಲಾಖೆ, ವೆಚ್ಚ—8
11) ರಕ್ಷಾ ಕಡತ 12) ಹೆಚ್ಚುವರಿ ಪ್ರತಿಗಳು 13) ಎಲ್ಲಾ ವಿಶ್ವವಿದ್ಯಾಲಯಗಳ ಕುಲಸಚಿವರು.

ಪ್ರತಿ ಮಾಹಿತಿಗಾಗಿ: ಮುಖ್ಯಮಂತ್ರಿಗಳ ಕಾರ್ಯದರ್ಶಿ ವಿಧಾನ ಸೌಧ, ಬೆಂಗಳೂರು.

Scanned with OKEN Scanner

UNIVERSITY GRANTS COMMISSION
BAHADUR SHAH ZAFAR MARG
NEW DELHI 110002.

No. F. 8-18/94 (CPP-I) December, 1994
28 DEC 1994

The Registrar,
Kuvempu University,
B.R.Project-577115
Shimoga Dist.

Sub;- Transfer of colleges from the head "College ~~teachers~~ tea up to Bachelors Degree" to University constituent colleges.

Sir,

I am directed to refer to your letter D.O.No.KU/5498 dated 3/9-11-94 on the above subject and to say that the name of the following colleges which already stand included in UGC List of colleges under section 2(f) of the UGC Act, 1956 have been transferred from the head "Affiliated colleges teaching up to Bachelors Degree" to "University constituent college".

1. Sahyadri Arts college, Shimoga
2. Sahyadri Science college, Shimoga

Consequently, the above two colleges are also declared fit to receive assistance from the U.G.C. & other Central sources in terms of the rules framed under Section 12-B of the UGC Act, 1956

Yours faithfully,

( R L SONDHI )
UNDER SECRETARY

2283
12/1/95

Copy to :-

1. The Principal, Sahyadri Arts College, Shimoga.
2. The Principal, Sahadri Science College, Shimoga.
3. The Secretary, Govt. of India, Ministry of Human Resource Development ( Deptt. of Education ) New Delhi.
4. The Deputy Secretary, Southern Regional Office, University Grants Commission, APSFC Building, 4th Floor, Chiragh Ali Line, Hyderabad-500001.

S.O., FD-III/S.O., CD-I UGC, Office.
All Officers/Sections in the UGC, Office.
Guard file.

1137
13-1-95

( D D MEHTA )
SECTION OFFICER